ಮಾಧ್ಯಮ ಮಾಹಿತಿ:

<u>ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ ಕಾರ್ಯಕ್ರಮ:</u>



ಬಿಬಿಎಂಪಿ ವತಿಯಿಂದ ಹೊಂಬೇಗೌಡನಗರ ವಾರ್ಡ್ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ ಕಾರ್ಯಕ್ರಮಕ್ಕೆ ಪೂಜ್ಯ ಮಹಾಪೌರರು ರವರು ಚಾಲನೆ ನೀಡಿದರು. ಈ ವೇಳೆ ಪಾಲಿಕೆ ಶಿಕ್ಷಣ ಅಧಿಕಾರಿಗಳು, ಡಾ. ಕಲಾವತಿ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಪಾಲಿಕೆ ವ್ಯಾಪ್ತಿಯ ಎಲ್ಲಾ ಅಂಗನವಾಡಿ ಕೇಂದ್ರಗಳು, ಸರ್ಕಾರಿ ಮತ್ತು ಖಾಸಗಿ ಶಾಲಾ-ಕಾಲೇಜುಗಳು ಹಾಗೂ ಶಾಲೆಯಿಂದ ಹೊರಗುರುಳಿದ 1 ರಿಂದ 19 ವರ್ಷ ಮಕ್ಕಳು ಸುಮಾರು 10 ಲಕ್ಷ ಇದ್ದು, ಎಲ್ಲರೂ ಜಂತುಹುಳು ನಿವಾರಣೆ ಮಾತ್ರೆ ಸೇವಿಸಿ ಎಂದು ಮಹಾಪೌರರು ರವರು ತಿಳಿಸಿದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬಳಿಕ ಮಾತನಾಡಿದ ಮಹಾಪೌರರು, ಜಂತುಹುಳು ನಾವು ತಿನ್ನುವ ಆಹಾರದಲ್ಲಿನ ಪೌಷ್ಠಿಕಾಂಶವನ್ನು ಸೇವಿಸುತ್ತವೆ. ಇದರಿಂದ ಮಿದುಳಿನ ಬೆಳವಣಿಗೆ ಕುಂಠಿತವಾಗುತ್ತದೆ. ಅಲ್ಲದೇ ಮಕ್ಕಳಲ್ಲಿನ ಏಕಾಗ್ರತೆಯನ್ನು ಕುಗ್ಗಿಸುತ್ತದೆ. ಜಂತು ಹುಳು ನಿರ್ಮೂಲನೆಯಿಂದಾಗಿ ಮಕ್ಕಳು ಸೇವನೆ ಮಾಡುವ ಪೌಷ್ಠಿಕ ಆಹಾರ ಮಕ್ಕಳ ದೇಹಕ್ಕೆ ಸರಿಯಾದ ರೀತಿಯಲ್ಲಿ ಲಭ್ಯವಾಗುತ್ತದೆ. ಜಂತುಹುಳು ನಿರ್ಮೂಲನೆಗೆ ಮಾತ್ರೆ ಸೇವಿಸುವುದು ಮಾತ್ರವಲ್ಲದೆ, ಊಟ ಮಾಡುವ ಮುನ್ನ ಕೈಗಳನ್ನು ಚನ್ನಾಗಿ ತೊಳೆಯುವ ಅಭ್ಯಾಸವನ್ನು ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ಜಂತುಹುಳು ನಿವಾರಣೆ ಔಷಧ ಸೇವಿಸುವುದರಿಂದ ಆರೋಗ್ಯ ಸುಧಾ ರಣೆ, ಅಪೌಷ್ಟಿಕತೆ ನಿವಾರಣೆ ಹಾಗೂ ಬೌದ್ಧಿಕ ಬೆಳವಣಿಗೆಯಾಗಲಿದೆ. ಬರಿ ಗಣ್ಣಿಗೆ ಕಾಣಿಸದ ಜಂತುಹುಳುಗಳ ಮಕ್ಕಳ ಬೆಳವಣಿಗೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರಲಿದೆ. ಆದ್ದರಿಂದ ಪೋಷಕರು ಮುಂಜಾಗೃತೆ ವಹಿಸಿ ತಮ್ಮ ಮಕ್ಕಳಿಗೆ ಜಂತುಹುಳ ಮಾತ್ರೆ ತಿನ್ನಿಸಿ ಎಂದರು.

